# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002

ಸಂಖ್ಯೆ: BBMP/Addl.Dir/JD NORTH/0117/2017-18 ದಿನಾಂಕ: 22/04/2019

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಸಂಖ್ಯೆ: 8 (ಹಳೇ ಸಂಖ್ಯೆ: 80/78/132/133), ಪಟ್ಟಂದೂರು ಅಗ್ರಹಾರ ಗ್ರಾಮ, ಕೆ.ಆರ್.ಪುರಂ ಹೋಬಳಿ, ವಾರ್ಡ್ ಸಂಖ್ಯೆ: 82, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD NORTH/0117/2017-18 ರಂತೆ ದಿನಾಂಕ: 30-05-2018.

2) ತಮ್ಮ ಮನವಿ ಪತ್ರ ದಿನಾಂಕ: 28-01-2019.

* * * * * * *

ಆಸ್ತಿ ಸಂಖ್ಯೆ: 8 (ಹಳೇ ಸಂಖ್ಯೆ: 80/78/132/133), ಪಟ್ಟಂದೂರು ಅಗ್ರಹಾರ ಗ್ರಾಮ, ಕೆ.ಆರ್.ಪುರಂ ಹೋಬಳಿ, ವಾರ್ಡ್ ಸಂಖ್ಯೆ: 82, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ಟವರ್ – ಎ, ಬಿ, ಸಿ, ಡಿ, ಇ, ಎಫ್, ಜಿ, ಹೆಚ್, ಜೆ, ಕೆ, ಎಲ್, ಎಮ್, ಎನ್, ಪಿ, ಕ್ಯೂ, ಆರ್ ಮತ್ತು ಎಸ್ ರಲ್ಲಿ 2 ಸಾಮಾನ್ಯ ತಳ ಮಹಡಿಗಳನ್ನೊಳಗೊಂಡಂತೆ ಒಟ್ಟು 17 ಟವರ್‌ಗಳಲ್ಲಿ ನೆಲ + ಮೇಲಿನ 4 ಅಂತಸ್ತುಗಳ 333 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡ ಮತ್ತು 2 ತಳ + ನೆಲ + ಮೇಲಿನ 3 ಅಂತಸ್ತುಗಳ ಕ್ಲಬ್‌ಹೌಸ್ ವಸತಿ ಸಮುಚ್ಚಯ ಕಟ್ಟಡ ನಿರ್ಮಿಸಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಸಂಖ್ಯೆ: ಬೆಂಅಪ್ರಾ/ನಯೋಸ/ಡಿಎಲ್‌ಪಿ-54/2016-17/2017/2017-18 ರಂತೆ ದಿನಾಂಕ: 28-02-2018 ರಂದು ವಸತಿ ಅಭಿವೃದ್ಧಿ ಯೋಜನಾ ಅನುಮೋದನೆಯನ್ನು ಪಡೆದುಕೊಂಡು ಅದರಂತೆ ಉಲ್ಲೇಖ (1) ರಂತೆ ಈ ಕಛೇರಿಯಿಂದ ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ, ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಿಸುತ್ತಿರುವುದನ್ನು ಪರಿವೀಕ್ಷಿಸಲಾಗಿದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 08-03-2019 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಸಂಬಂಧ ಪ್ರಾರಂಭಿಕ ಪ್ರಮಾಣಪತ್ರ ಶುಲ್ಕದೊಂದಿಗೆ ನಕ್ಷೆ ಮಂಜೂರಾತಿ ನೀಡಿರುವ ವ್ಯತ್ಯಾಸದ ಮೊತ್ತ ಸೇರಿ ಒಟ್ಟು ರೂ. 24,11,000/- ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000656 ದಿನಾಂಕ: 30-03-2019 ರಂದು ಸಂದಾಯ ಮಾಡಿರುವುದರಿಂದ, ಸದರಿ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಯಾವುದೇ ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

3. ನಕ್ಷೆ ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

5. ವಿವಿಧ ಇಲಾಖೆಗಳಿಂದ ನೀಡಲಾಗಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಷರತ್ತಿಗಳಿಗೆ ಬದ್ಧರಾಗಿರತಕ್ಕದ್ದು.

6. ನಿವೇಶನದ ಖಾತಾ ವಿಭಜನೆ, ದಾಖಲಾತಿಗಳನ್ನು / ಸ್ವತ್ತಿನ ಹಕ್ಕನ್ನು ಬದಲಾಯಿಸಿದಲ್ಲಿ ಮತ್ತು ಯಾವುದೇ ರೀತಿ ದಾಖಲಾತಿಗಳನ್ನು ಅಥವಾ ವಾಸ್ತವಾಂಶ ಮರೆಮಾಚಿದಲ್ಲಿ ಅರ್ಜಿದಾರರು ನೇರ ಹೊಣೆಯಾಗಿರುತ್ತಾರೆ ಮತ್ತು ನೀಡಲಾದ ಕಟ್ಟಡ ನಕ್ಷೆ ಮಂಜೂರಾತಿಯು ತನ್ನಿಂದತಾನೇ ರದ್ದುಗೊಳ್ಳುತ್ತದೆ.

ಸಹಿ /-

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ,

ಮೆ॥ ಬ್ರಿಗೇಡ್ ಎಂಟರ್‌ಪ್ರೈಸಸ್ ಲಿ., ಜಿ.ಪಿ.ಎ.ದಾರರು
ಮೆ॥ ಯು.ಕೇನ್ ಇಂಡಿಯಾ ಪ್ರೈ ಲಿ., ಖಾತಾದಾರರು,
# 29 ಮತ್ತು 30ನೇ ಮಹಡಿ, ವರ್ಲ್ಡ್ ಟ್ರೇಡ್ ಸೆಂಟರ್,
ಬ್ರಿಗೇಡ್ ಗೇಟ್‌ವೇ ಕ್ಯಾಂಪಸ್, 26/1,
ಡಾ॥ ರಾಜ್‌ಕುಮಾರ್ ರಸ್ತೆ, ಮಲ್ಲೇಶ್ವರಂ-ರಾಜಾಜಿನಗರ,
ಬೆಂಗಳೂರು- 560 055.

ಪ್ರತಿಯನ್ನು:

1. ಕಾರ್ಯಪಾಲಕ ಅಭಿಯಂತರರು (ಮಹದೇವಪುರ ವಿಭಾಗ), ಸಹಾಯಕ ಕಾರ್ಯಪಾಲಕ ಅಭಿಯಂತರರು, (ಹೂಡಿ ಉಪ-ವಿಭಾಗ) ರವರಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕಾಗಿ.
2. ಕಛೇರಿ ಪ್ರತಿ.

B.R. Muddaki 22/4/19

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

22/4/19 22/4/19 22/4/19